**ಸಿ ಸಿ ನಂ. 21/2021**

**ಪಿಡಬ್ಲ್ಯೂ - 1 ಜೋಸೆಫ್ ಎಂ ಆರ್**

**<u>ದಿನಾಂಕ 21.11.2022 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ : ಶ್ರೀ. ಎನ್ ಜಿ ಕೆ ಪಿರ್ಯಾದಿ ಪರ ವಕೀಲರಿಂದಃ</u>**

ನನ್ನ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು, ಅದನ್ನು ನನ್ನ ಮಾಹಿತಿಯ ಮೇರೆಗೆ ನನ್ನ ವಕೀಲರು ತಯಾರಿಸಿದ್ದು ಅದರಲ್ಲಿರುವ ಸಂಗತಿಗಳು ಸತ್ಯವಾಗಿರುತ್ತವೆ. ಅದಕ್ಕೆ ನಾನು ನನ್ನ ಸಹಿಗಳನ್ನು ಹಾಕಿರುತ್ತೇನೆ. ಈ ಕೆಳಗಿನ ದಾಖಲೆಗಳನ್ನು ನಿಶಾನೆಗಳಾಗಿ ಹಾಜರುಪಡಿಸಿರುತ್ತೇನೆ.

ಆರೋಪಿ ನನಗೆ ನೀಡಿದ ಒಂದು ಚೆಕ್ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಮತ್ತು ಆರೋಪಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಬ್ಯಾಂಕ್‌ನವರು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಆರೋಪಿಗೆ ವಕೀಲರ ಮುಖಾಂತರ ನೀಡಿದ ನೋಟೀಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ಅಂಚೆ ಸ್ವೀಕೃತಿಯನ್ನು ಹಾಜರಿ ಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಆದ್ದರಿಂದ ಆರೋಪಿಯ ವಿರುದ್ಧ ಕಾನೂನಿನನ್ವಯ ಸೂಕ್ತಕ್ರಮ ಕೈಗೊಳ್ಳಬೇಕೆಂದು ಪ್ರಾರ್ಥನೆ.

ಆರೋಪಿ ಪರ ವಕೀಲರು ಪಾಟಿ ಸವಾಲಿಗೆ ಅನುಮತಿ ಕೋರಿ ಎನ್ ಐ ಆಕ್ಟ್ ಕಲಂ 145 ಯಾವುದೇ ಅರ್ಜಿಯನ್ನು ಸಲ್ಲಿಸದ ಕಾರಣ ಪಾಟಿ ಸವಾಲು ಇರುವುದಿಲ್ಲ ಎಂದು ಪರಿಗಣಿಸಲಾಯಿತು.

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ,

ಸಹಿ/-
(ಸಂತೋಷ ಕೊಠಾರಿ )
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ವಿರಾಜಪೇಟೆ